# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

KANNADA POST

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನ ಪತ್ರಿಕೆ   Kannada Daily

ಹಾಸನ   E-mail : kannadapostnews@gmail.com   / ಕನ್ನಡ post   Price: ₹1

Vol.No.01 | Issue. 190 | Pages. 2 | Date: 06-06-2025, FRIDAY   RNI NO: KARKAN/2024/89601

ಸಂಪುಟ : 01 - ಸಂಚಿಕೆ : 190 - ಪುಟಗಳು : 2 - 06 ಜೂನ್ 2025 ಶುಕ್ರವಾರ   Ph: 8762954248   ದರ : ₹1


# ಪರಿಸರ ಉಳಿಸೋಣ ಭವಿಷ್ಯ ಕಟ್ಟೋಣ

## ವಿಶ್ವ ಪರಿಸರ ದಿನಾಚರಣೆಯಲ್ಲಿ ನ್ಯಾ. ಹಿದಾಯತ್‌ಉಲ್ಲ ಷರೀಫ್ ಕರೆ | ಗಿಡ ನೆಡುವ ಪ್ರತಿಜ್ಞೆ ಸ್ವೀಕಾರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಪರಿಸರ ಜೀವಶಕ್ತಿಯ ಮೂಲವಾಗಿದೆ ಅದನ್ನು ಉಳಿಸಿ ಸಂರಕ್ಷಿಸಬೇಕು, ನಾವೆಲ್ಲರೂ ಪ್ರಕೃತಿಯೊಂದಿಗೆ ಸಮನ್ವಯದಿಂದ ಬದುಕಬೇಕು ಎಂದು 2ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹಿದಾಯತ್ ಉಲ್ಲ ಷರೀಫ್ ಹೇಳಿದರು.

ಜಿಲ್ಲಾಡಳಿತ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಅರಣ್ಯ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ನಗರಸಭೆ, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಮತ್ತು ಕೈಗಾರಿಕೆ ವತಿಯಿಂದ ಗುರುವಾರ ಹಾಸನಾಂಬ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು.



1972ರ ನಂತರ ಪ್ರತಿ ವರ್ಷ ಜೂನ್ 5ರಂದು ವಿಶ್ವ ಪರಿಸರ ದಿನಾಚರಣೆ ಆಚರಿಸುತ್ತಿದ್ದೇವೆ. ಇದರ ಉದ್ದೇಶ ಸಾರ್ವಜನಿಕರಲ್ಲಿ ಪರಿಸರ ಸಂರಕ್ಷಣೆ ಕುರಿತು ಅರಿವು ಮೂಡಿಸುವಂತಹದ್ದಾಗಿದೆ. ಹಾಗಾಗಿ ನಾವೆಲ್ಲರೂ ಪರಿಸರ ಉಳಿಸಲು ಎಲ್ಲಾ ಜಾತಿ ಧರ್ಮ ಮರೆತು ಒಂದಾಗಿ ಹೋರಾಡಬೇಕು ಎಂದು ಹೇಳಿದರು.

ಹವಾಮಾನ ಬದಲಾವಣೆ, ಅಕಾಲಿಕ ಕ್ಷಾಮ, ಚಂಡಮಾರುತಕ್ಕೆ ಪರಿಸರ ಮಾಲಿನ್ಯವೇ ಕಾರಣವಾಗಿದೆ. ಇಂದು ಫಲವತ್ತಾದ ಭೂಮಿ ಮರುಭೂಮಿಯಾಗಿ ಮಾರ್ಪಟ್ಟಿದೆ. ಹೀಗೆ ಪರಿಸರ ನಾಶ ಮಾಡುವುದು ಮನುಷ್ಯ ಕುಲ. ತನ್ನನ್ನೇ ತಾನು ವಿನಾಶದ ಅಂಚಿಗೆ ಕರೆದೊಯ್ಯುವಂತದ್ದಾಗಿದೆ. ಪರಿಸರ ಸಂರಕ್ಷಿಸುವುದು ನಮ್ಮೆಲ್ಲರ ಕರ್ತವ್ಯ. ಪ್ಲಾಸ್ಟಿಕ್ ಅನ್ನು ನಿರ್ಮೂಲನೆ ಮಾಡಿ ನಮ್ಮ ಪೂರ್ವಜರು ಬಳುವಳಿಯಾಗಿ ಕೊಟ್ಟಿರುವ ಪ್ರಕೃತಿಯನ್ನು ಸಂರಕ್ಷಿಸಿ ಭವಿಷ್ಯದ ಪೀಳಿಗೆಗೆ ಕೊಡುಗೆಯಾಗಿ ನೀಡಬೇಕು ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಸಿ. ಸತ್ಯಭಾಮ ಮಾತನಾಡಿ, ಪರಿಸರ ಸಂರಕ್ಷಣೆಯಲ್ಲಿ ಕೈಗಾರಿಕೆಗಳ ಹೊಣೆಗಾರಿಕೆ ಹಿಂದಿಗಿಂತ ಹೆಚ್ಚಿನದಾಗಿದೆ. ಭೂಮಿಯ ಮೇಲೆ ಜೀವಿಸುವ ಹಕ್ಕು ಕೇವಲ ಮಾನವರಿಗಷ್ಟೇ ಅಲ್ಲದೆ ಪ್ರತಿಯೊಂದು ಜೀವ ಜಂತುಗಳಿಗೂ ಮರ ಗಿಡಗಳಿಗೂ ಇದೆ ಎಂದು ತಿಳಿಸಿದರು.

ಪ್ರಸ್ತುತ ದಿನಮಾನದಲ್ಲಿ ಜಾಗತಿಕ ತಾಪಮಾನ ಹೆಚ್ಚಾಗುತ್ತಿರುವುದು, ಕಾಡ್ಗಿಚ್ಚು ಸಂಭವಿಸುತ್ತಿರುವುದು ಪರಿಸರ ಮಾಲಿನ್ಯದಿಂದಾಗಿದೆ. ಹಾಗಾಗಿ ನಾವು ಮುಂದಿನ ಪೀಳಿಗೆಗೆ ಸುಸ್ಥಿರ ಭೂಮಿ ಕೊಡಬೇಕು. ಮಕ್ಕಳಿಗೂ ಪರಿಸರದ ಕುರಿತ ಅರಿವು ಮೂಡಿಸಬೇಕು. ಪ್ರತಿಯೊಬ್ಬರು ಪ್ರಕೃತಿಗೆ ನನ್ನ ಕೊಡುಗೆ ಏನಿದೆ ಎಂಬುದನ್ನುಆತ್ಮಾವಲೋಕನ ಮಾಡಿಕೊಳ್ಳಬೇಕುಎಂದರು.

ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಜಿ.ಕೆ. ದಾಕ್ಷಾಯಿಣಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಬ್‌ಕುಮಾರ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಟಿ. ಪ್ರಸನ್ನ, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್‌ನ ಹೆಚ್.ಜಿ. ಕಾಂಚನಮಾಲ, ಪರಿಸರ ಅಧಿಕಾರಿ ಸುಗಂಧ ಹಾಗೂ ಇತರರಿದ್ದರು.

### ಪ್ರಕೃತಿ ಮುನಿಸು ಘೋರ

ಹಿಂದೆ ಪೂರ್ವಜರು ಸೂರ್ಯನಿಗೆ ನಮಸ್ಕರಿಸುತ್ತಿದ್ದರು. ಯೋಗಾಭ್ಯಾಸ ಮಾಡುತ್ತಿದ್ದರು. ಅದನ್ನು ಇಂದು ನಾವು ಅಳವಡಿಸಿಕೊಳ್ಳಬೇಕು. ಪ್ರಕೃತಿಯು ಸಹನೆ ಮೀರಿದ ನಂತರ ತಿರುಗಿ ನಾವು ಪ್ರಕೃತಿಗೆ ಏನು ಮಾಡಿರುತ್ತೇವೋ ಅದನ್ನೇ ನಮಗೆ ಕೊಡುತ್ತದೆ.

ಹಾಗಾಗಿ ಸಾಧ್ಯವಾದಷ್ಟು ಸರಳತೆಯನ್ನು ಮೈಗೂಡಿಸಿಕೊಂಡು ಮನೆಯಿಂದಲೇ ಸಣ್ಣಪುಟ್ಟ ವಿಷಗಳಲ್ಲಿಯೂ ಸಹ ಪರಿಸರವನ್ನು ಮಲಿನ ಮಾಡದೆ ಸಂರಕ್ಷಿಸಬೇಕುಎಂದು ಹೇಳಿದರು.

ಪ್ರಸ್ತುತ ಜಿಲ್ಲೆಯಲ್ಲಿ ಅನೇಕ ಕೆರೆಗಳ ನೀರು ಯೋಗ್ಯವಾಗಿಲ್ಲ. ಕೆರೆಗಳ ನೀರನ್ನು ಪರೀಕ್ಷೆ ಮಾಡಲು ತಿಳಿಸಿದ್ದೇನೆ. ನೀರನ್ನು ಮಿತವಾಗಿ ಬಳಸಿ ಪ್ಲಾಸ್ಟಿಕ್ ಬಳಕೆ ಕಡಿಮೆ ಮಾಡಿ, ತಮ್ಮ ತಂದೆ-ತಾಯಿ, ಸಹೋದರರ ಹೆಸರಿನಲ್ಲಿ ಗಿಡವನ್ನು ನೆಡುವ ಮೂಲಕ ನಿಮ್ಮದೇ ಆದ ದಾರಿಯಲ್ಲಿ ಪ್ರಕೃತಿಗೆ ಕೊಡುಗೆ ನೀಡಿ ಎಂದರು.

ಇದೇ ಸಂದರ್ಭದಲ್ಲಿ ಪ್ರತಿಯೊಬ್ಬರೂ ತಮ್ಮ ಮನೆಯಲ್ಲಿ ಅಥವಾ ಶಾಲೆಯಲ್ಲಿ, ರಸ್ತೆ ಬದಿಯಲ್ಲಿ ಒಂದೊಂದು ಗಿಡ ನೆಡುತ್ತೇವೆ ಎಂದು ಪ್ರತಿಜ್ಞೆ ಸ್ವೀಕರಿಸಬೇಕು ಎಂದರು. ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಚಿತ್ರಕಲೆ ಸ್ಪರ್ಧೆಯಲ್ಲಿ ವಿಜೇತರಾದ ವಿವಿಧ ಶಾಲೆಯ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ, ಜಿಲ್ಲಾ ಮಟ್ಟದಲ್ಲಿಸಾಮಾಜಿಕ ಜಾಲತಾಣದಲ್ಲಿ ಪ್ಲಾಸ್ಟಿಕ್ ನಿಷೇಧದ ಕುರಿತು ಕನ್ನಡ ಮತ್ತುಇಂಗ್ಲಿ ಭಾಷೆಯಲ್ಲಿ ಆಯೋಜಿಸಿದ್ದ ರಿಲ್ಸ್ ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳಿಗೆ ನಗದು ಬಹುಮಾನ ನೀಡಲಾಯಿತು.

# ಪರಿಸರ ಉಳಿದರೆ ಜೀವ ಸಂಕುಲ ಉಳಿವು: ಶಾಸಕ ಬಾಲಕೃಷ್ಣ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಕೇಂದ್ರ ಸರ್ಕಾರ ಕಳೆದ ವರ್ಷ ಹವಾಮಾನ ಇಲಾಖೆ ಮೂಲಕ ನಡೆಸಿದ ಅಧ್ಯಯನದಲ್ಲಿ ದೇಶದಲ್ಲಿಯೇ ಚನ್ನರಾಯಪಟ್ಟಣ ಉತ್ತಮ ಪರಿಸರ ಹೊಂದಿರುವ ನಗರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ಪಟ್ಟಣದ ಗಿರಿನಗರದ ಸರ್ಕಾರಿ ಆಯುರ್ವೇದ ಆಸ್ಪತ್ರೆಯ ಆವರಣದಲ್ಲಿ ಮಕ್ಕಳ ಸಾಹಿತ್ಯ ಪರಿಷತ್, ಭೂಮಿ ಉಳಿಸಿ ಆಂದೋಲನ, ಅರಣ್ಯ ಇಲಾಖೆ ಹಾಗೂ ಲಯನ್ಸ್ ಕ್ಲಬ್ ಸಹಯೋಗದಲ್ಲಿ ವಿಶ್ವ ಪರಿಸರ ದಿನದ ಪ್ರಯುಕ್ತ ಗುರುವಾರ ಹಮ್ಮಿಕೊಂಡಿದ್ದ ಔಷಧಿ ಗಿಡಗಳನ್ನು ನೆಡುವ ಕಾರ್ಯಕ್ರಮಕ್ಕೆ ಪಾರಿಜಾತ ಸಸಿ ನೆಟ್ಟು ಚಾಲನೆ ನೀಡಿ ಮಾತನಾಡಿದರು.

ಅರಣ್ಯ ಇಲಾಖೆ, ಸಾಹಿತ್ಯ ಪರಿಷತ್, ಭೂಮಿ ಉಳಿಸಿ ಆಂದೋಲನ ಸೇರಿದಂತೆ ವಿವಿಧ ಸಂಘಟನೆಗಳು ಹಲವು ಕಾರ್ಯಕ್ರಮ ಹಮ್ಮಿಕೊಳ್ಳು ಮೂಲಕ ಲಕ್ಷಾಂತರ ಸಸಿ ನೆಟ್ಟು ಪೋಷಣೆ ಮಾಡಿದ ಫಲವಾಗಿ ನಾವು ಉತ್ತಮ ಪರಿಸರ ಹೊಂದಿದ್ದೇವೆ ಎಂದು ಶ್ಲಾಘಿಸಿದರು.

ಭೂಮಿಯ ಮೇಲಿರುವ ಪ್ರತಿಯೊಂದು ಸಸ್ಯವೂ ಔಷಧ ಗುಣವನ್ನು ಹೊಂದಿವೆ. ಆದರೆ ನಾವು ಸರಿಯಾಗಿ ಬಳಕೆ ಮಾಡಿಕೊಳ್ಳದೆ ಇಂಗ್ಲೀಷ್ ಮೆಡಿಷಿನ್‌ಗಳಿಗೆ ಮೊರೆ ಹೋಗಿದ್ದೇವೆ. ಇತ್ತಲ ಗಿಡ ಮದ್ದಲ್ಲ ಎಂಬ ಮಾತಿನಂತೆ ನಾವು ಔಷಧ ಗಿಡಗಳನ್ನು ಬಳಸದೆ ಇರುವುದು ನಮ್ಮ ಆರೋಗ್ಯದ ಹಿನ್ನಡೆಗೆ ಕಾರಣವಾಗಿದೆ. ಪರಿಸರ ಉಳಿದರಷ್ಟೇ ಮಾನವ ಸಂಕುಲ ಉಳಿಯುತ್ತದೆ ಎಂದರು.

ಪರಿಸರ ಉಳಿದರೆ ಮಾತ್ರ ಮನಕುಲ ಸೇರಿದಂತೆ ಸಕಲ ಜೀವಸಂಕುಲ ಈ ಭೂಮಿಯ ಮೇಲೆ ಬದುಕುಳಿಯಲು ಸಾಧ್ಯ. ಅರಣ್ಯ ಪ್ರದೇಶ ಉಳಿಯಬೇಕು. ನಮ್ಮ ಅಧಿಕಾರದ ಅವದಿಯಲ್ಲಿ ಇದೂವರೆಗೂ ಅರಣ್ಯ ಪ್ರದೇಶವು ಒತ್ತುವರಿಯಾಗಲು ಬಿಟ್ಟಿಲ್ಲ ಎಂದು ತಿಳಿಸಿದರು.

ಪರಿಸರ ಪ್ರೇಮಿ ಸಿ.ಎನ್.ಅಶೋಕ್ ಮಾತನಾಡಿ, ನಗರೀಕರಣ ಹಾಗೂ ಇನ್ನಿತರೆ ಸಲುವಾಗಿ ಅರಣ್ಯ ಪ್ರದೇಶ ಕ್ಷೀಣಿಸುತ್ತಿರುವ ಪರಿಣಾಮ ದಿನದಿಂದ ದಿನಕ್ಕೆ ಆಕ್ಸಿಜನ್ ಉತ್ಪತ್ತಿಯ ಪ್ರಮಾಣ ಕಡಿಮೆಯಾಗುತ್ತಿದೆ. ದಯವಿಟ್ಟು ಮುಂದಿನ ಭವಿಷ್ಯದ ಸಲುವಾಗಿ ಪರಿಸರ ಸಂರಕ್ಷಣೆ ಹಾಗೂ ಅಭಿವೃದ್ಧಿಗೆ ಎಲ್ಲರೂ ಮುಂದಾಗಬೇಕು ಎಂದು ಮನವಿ ಮಾಡಿದರು. ಮನೆಯಂಗಳ, ದೇಗುಲ ಹಾಗೂ ಶಾಲಾ ಆವರಣಗಳಿದ್ದಲ್ಲಿ ನಮ್ಮ ಗಮನಕ್ಕೆ ತಂದರೆ ನಾವೇ ಸಸಿಗಳನ್ನು ತಂದು ನೆಡುವ ವ್ಯವಸ್ಥೆ ಮಾಡುತ್ತೇವೆ. ಪರಿಸರ ನಾಶ ಹೊಂದಿ ಪ್ರಕೃತಿ ವಿಕೋಪ ಹೆಚ್ಚುತ್ತಿದ್ದು ಇನ್ನಾದರೂ ಎಚ್ಚೆತ್ತುಕೊಳ್ಳದಿದ್ದಲ್ಲಿ ಮುಂದಿನ ದಿನಗಳು ಕರಾಳವಾಗಿರುತ್ತವೆ ಎಂದು ಎಚ್ಚರಿಸಿದರು.

ವೈದ್ಯಾಧಿಕಾರಿ ಡಾ.ವಿ.ಮಹೇಶ್, ಸರ್ಕಾರಿ ಆಯುವೇದ ಆಸ್ಪತ್ರೆಯ ವೈದ್ಯರಾದ ಡಾ.ಪವನ್, ಡಾ.ಅಭಿಷೇಕ್, ಡಾ.ತ್ರಿವೇಣಿ, ಜಿಲ್ಲಾ ಆಯುಷ್ ಅಧಿಕಾರಿ ಡಾ.ರಾಮಚಂದ್ರ, ಅರಣ್ಯ ಇಲಾಖೆಯ ಆರ್‌ಎಫ್ಒ ತಿರುಮಲೇಶ್, ಎಸಿಎಫ್ ಕಲಂದರ್, ಪ್ರಮುಖರಾದ ಸಿದ್ದೇಶ್, ಮನೋಹರ್, ಮಹದೇವ್, ಜಯರಾಂ, ಯಶೋಧರ ಜೈನ್ ಇತರರು ಇದ್ದರು.

# ವಿದ್ಯಾರ್ಥಿ ಭೂಮಿಕ್‌ಗೆ ಕಣ್ಣೀರ ವಿದಾಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಆರ್‌ಸಿಬಿ ವಿಜಯೋತ್ಸವ ವೇಳೆ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಬುಧವಾರ ಸಂಭವಿಸಿದ ಕಾಲ್ತುಳಿತದಲ್ಲಿ ಸಾವಿಗೀಡಾದ ತಾಲ್ಲೂಕಿನ ಕುಪ್ಪಗೋಡು ಗ್ರಾಮದ ಭೂಮಿಕ್ (20) ಅಂತ್ಯಕ್ರಿಯೆ ಗುರುವಾರ ಹುಟ್ಟೂರಿನಲ್ಲಿ ನೆರವೇರಿತು.

ಬೆಳಗಿನ ಜಾವ ಬೆಂಗಳೂರಿನಿಂದ ಮೃತದೇಹ ಆಗಮಿಸಿತು. ಈ ವೇಳೆ ಪೋಷಕರು ಹಾಗೂ ಸಂಬಂಧಿಕರ ಆಕ್ರಂದನ ಮುಗಿಲು ಮುಟ್ಟಿತ್ತು. ಮಗನ ಮೃತದೇಹ ತಬ್ಬಿಕೊಂಡು ತಂದೆ-ತಾಯಿ ಕಣ್ಣೀರು ಹಾಕಿದ್ದನ್ನು ನೋಡಿ ನೆರೆದಿದ್ದವರೂ ಕಣ್ಣೀರಿಟ್ಟರು.

ಈ ವೇಳೆ ದುಃಖ ತೋಡಿಕೊಂಡ ತಂದೆ ಲಕ್ಷ್ಮಣ್, ಇದ್ದ ಒಬ್ಬ ಮಗನ ಜೀವನವನ್ನು ಉತ್ತಮವಾಗಿ ರೂಪಿಸಲು ಬೆಂಗಳೂರಿನಲ್ಲಿ ಓದಿಸುತ್ತಿದ್ದೆ. ಯಾವುದೇ



ದುರಭ್ಯಾಸ ಇಲ್ಲದ ನನ್ನ ಪ್ರೀತಿಯ ಮಗ ಕ್ರಿಕೆಟ್ ವ್ಯಾಮೋಹಕ್ಕೆ ಬಲಿಯಾಗಿದ್ದಾನೆ. ನೂರು ಕೋಟಿ ಇದ್ದರೂ ಅವರನ್ನು ಮರಳಿ ತರಲಾರೆ. ಸರ್ಕಾರಕ್ಕೆ ನಾವು ಕೊಟ್ಯಂತರ ರೂ.ತೆರಿಗೆ ಕಟ್ಟುತ್ತೇವೆ. ದೊಡ್ಡ ಕಾರ್ಯಕ್ರಮಕ್ಕೆ ಸೂಕ್ತ ಬಂದೋಬಸ್ತ್ ಮಾಡದ ಮೇಲೆ ಇಂತಹ ಕಾರ್ಯಕ್ರಮ ಏಕೆ ಬೇಕಿತ್ತು ಎಂದು ಪ್ರಶ್ನಿಸಿದರು.

ನನ್ನ ಮಗನಂತೆಯೇ ಬೇರೆಯವರ ಮಕ್ಕಳನ್ನೂ ಸರ್ಕಾರದವರು ಅವರ ಆಡಂಬರಕ್ಕೆ ಬಲಿ ಪಡೆದಿದ್ದಾರೆ. ನನ್ನ ಮಗ ಕಾಲೇಜಿಗೆ ಹೋಗಿ ಬರುವೆ ಎಂದು ತಾಯಿಗೆ ಹೇಳಿ ಹೋದವನು, ನಂತರ ಸ್ನೇಹಿತರ ಜೊತೆ ಸ್ಟೇಡಿಯಂಗೆ ಹೋಗಿ ಬಾರದ ಲೋಕಕ್ಕೆ ತೆರಳಿದ್ದಾನೆ ಎಂದು ಕಣ್ಣೀರು ಸುರಿಸಿದರು.

ಸಂಸದ ಶ್ರೇಯಸ್ ಪಟೇಲ್, ಶಾಸಕ ಹೆಚ್.ಕೆ.ಸುರೇಶ್ ಮೃತರ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

### ರಾಜಕೀಯ ಮಾಡಬೇಡಿ

ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ಬದುಕಿ ಬಾಳಬೇಕಿದ್ದ ಜೀವ ಅಳಿದಿವೆ. ಆರ್‌ಸಿಬಿ ವಿಜಯೋತ್ಸವ ಸಂಭ್ರಮವನ್ನು ಕಹಿ ಘಟನೆ ಮರೆಸಿದೆ. ಈ ವಿಚಾರದಲ್ಲಿ ಯಾರೂ ರಾಜಕೀಯ ಮಾಡಬೇಡಿ ಎಂದು ಮನವಿ ಮಾಡಿದರು.

ಘಟನೆ ಕುರಿತು ಸಮಗ್ರ ತನಿಖೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶಿಸಿದ್ದಾರೆ. ಯಾವ ಇಲಾಖೆ ವೈಫಲ್ಯ ಇದೆ, ಯಾವ ಇಲಾಖೆದು ತಪ್ಪಿದೆ ಎಂಬುದು ತನಿಖೆ ಬಳಿಕ ಗೊತ್ತಾಗುತ್ತದೆ. ಯಾರೇ ತಪ್ಪಿತಸ್ಥರಿದ್ದರು ಕ್ರಮ ಆಗಬೇಕು ಎಂದು ಆಗ್ರಹಿಸುತ್ತೇನೆ ಎಂದರು.

ಖ್ಯಾತ ಕ್ರಿಕೆಟ್ ತಾರೆಗಳಾದ ವಿರಾಟ್ ಕೊಹ್ಲಿ ಮತ್ತು ಇತರರು ಬಂದಿದ್ದರಿಂದ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿದರು. ಗುಪ್ತಚರ ಇಲಾಖೆ ಈ ವಿಷಯದಲ್ಲಿ ಏನು ಮಾಡುತ್ತಿದ್ದರು ಎಂಬುದು ಪ್ರಶ್ನೆಯಾಗಿದೆ. ಫೈನಲ್ ಆಟದ ದಿನ ನಾವು ಸೇರಿ ಎಲ್ಲರೂ ಸಂಭ್ರಮಾಚರಣೆ ಮಾಡಿದ್ದೇವೆ. ಗುಪ್ತಚರ ಇಲಾಖೆಗೆ ಮಾಹಿತಿ ಇದ್ದರೂ ಸುಮ್ಮನಾಗಿದ್ದು ಏಕೆ.

ತನಿಖೆಯಲ್ಲಿ ಸತ್ಯಾಸತ್ಯತೆ ಹೊರಗೆ ಬರುತ್ತೆ. ಯಾವತ್ತಿಗೂ ಮರೆಯಲಾಗದ ಕಹಿ ಘಟನೆ ಇದಾಗಿದೆ ಎಂದರು.



ಹಾಸನ: ನಗರದ ಪ್ರಾದೇಶಿಕ ಸಾರಿಗೆ ಅಧಿಕಾರಿ ಕಚೇರಿ ಆವರಣದಲ್ಲಿ ಗುರುವಾರ ವಿಶ್ವ ಪರಿಸರ ದಿನದ ಅಂಗವಾಗಿ ಸಸಿ ನೆಡಲಾಯಿತು.

ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಬಿ.ಪಿ. ಕೃಷ್ಣೇಗೌಡ, ಆರ್‌ಟಿಒ ರಾಜಕುಮಾರ್, ಹಿರಿಯ ಮೋಟಾರು ವಾಹನ ನಿರೀಕ್ಷಕ ಪಿ.ಆರ್. ಯಶ್ವಂತ್ ಮತ್ತಿತರರಿದ್ದರು.

# ಪರಿಸರ ನಾಶವಾದರೆ ಭವಿಷ್ಯದ ದಿನಗಳು ಮಾರಕ



ಶ್ರವಣಬೆಳಗೊಳ: ಉಸಿರಾಟದ ಮೂಲವಾದ ಪರಿಸರವನ್ನು ನಾಶ ಮಾಡಿದರೆ ಭವಿಷ್ಯದ ದಿನಗಳು ಮಾರಕವಾಗಲಿದೆ ಎಂದು ಶ್ರವಣಬೆಳಗೊಳ ಜೈನ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಸ್ವಸ್ತಿಶ್ರೀ ಅಭಿನವ ಚಾರುಕೀರ್ತಿ ಭಟ್ಟಾರಕ ಸ್ವಾಮೀಜಿ ಆತಂಕ ವ್ಯಕ್ತಪಡಿಸಿದರು.

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಬಾಹುಬಲಿ ಶಿಕ್ಷಣ ಸಂಸ್ಥೆಗಳ ವತಿಯಿಂದ ಗುರುವಾರ ಶ್ರೀಮಠದ ಆವರಣದಲ್ಲಿ ಆಯೋಜಿಸಿದ್ದ ಪರಿಸರ ಜಾಗೃತಿ ಜಾಥಾಗೆ ಚಾಲನೆ ನೀಡಿ ಮಾತನಾಡಿದ ಅವರು, ಮರ, ಗಿಡ, ಕಲ್ಲು, ಮಣ್ಣು, ನದಿ ಹೀಗೆ ಪ್ರಕೃತಿಯನ್ನು ಆರಾಧಿಸುವ ದೇಶ ಭಾರತ. ನಮ್ಮ ಪೂರ್ವಜರು ಪರಿಸರಕ್ಕೆ ದೈವತ್ವ ಹಾಗು ಪೂಜನೀಯ ಸ್ಥಾನ ನೀಡಿದ್ದರು. ಮನುಷ್ಯ ನಿರ್ಮಾಣ ಮಾಡಲು ಸಾಧ್ಯವಾಗದ ಪ್ರತಿಯೊಂದು ವಸ್ತುವೂ ಪರಿಸರವಾಗಿದ್ದು, ಆಧುನಿಕತೆಯ ಭರಾಟೆಯಲ್ಲಿ ಮನುಷ್ಯ ಪರಿಸರವನ್ನು ನಾಶ ಮಾಡುತ್ತಿರುವುದು ವಿಷಾದನೀಯ ಎಂದರು.

ಮುಂದಿನ ಪೀಳಿಗೆಗೆ ಬದುಕಲು ಅತ್ಯವಶ್ಯಕವಾದ ಉತ್ತಮ ಗಾಳಿ, ನೀರು ದೊರೆಯಬೇಕಾದರೆ ಪರಿಸರ ರಕ್ಷಣೆ ಹಾಗು ಜಾಗೃತಿ ಮೂಡಿಸುವುದು ನಮ್ಮ ಕರ್ತವ್ಯವಾಗಿದೆ ಎಂದು ಹೇಳಿದರು.

ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ಬಿ.ಆರ್. ಯುವರಾಜ್ ಮಾತನಾಡಿ, ಪರಿಸರ ದಿನಾಚರಣೆ ಕೇವಲ ಒಂದು ದಿನದ ಆಚರಣೆಗೆ ಸೀಮಿತವಾಗಬಾರದು. ಪ್ರತಿದಿನವೂ ಪರಿಸರದ ಕುರಿತು ಜವಾಬ್ದಾರಿಯಿಂದ ನಡೆದುಕೊಳ್ಳುವುದು ನಿಜವಾದ ದಿನಾಚರಣೆ. ಸುತ್ತಮುತ್ತಲಿನ ಪರಿಸರ ಸ್ವಚ್ಛವಾಗಿದ್ದರೆ ಆರೋಗ್ಯ ಹೊಂದಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಅಫ್ತಾಬ್ ಪಾಷಾ ಮಾತನಾಡಿ, ನಮ್ಮ ಮನೆಯನ್ನು ಸ್ವಚ್ಛವಾಗಿಟ್ಟುಕೊಳ್ಳುವಂತೆ ಬೀದಿ, ಗ್ರಾಮವನ್ನು ಶುಚಿಯಾಗಿಸಲು ಆದ್ಯತೆ ನೀಡಬೇಕು ಎಂದರು.

ಗ್ರಾಮ ಪಂಚಾಯಿತಿ ಸದಸ್ಯ ಯಶಸ್ ಜೈನ್, ಪಿಎಸ್‌ಐ ನವೀನ್ ಕುಮಾರ್, ಶ್ರೀಮಠದ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಹೆಚ್.ಪಿ. ಅಶೋಕ್ ಕುಮಾರ್, ಸದಸ್ಯ ಹೇಮಂತ್ ಕುಮಾರ್, ಕಾರ್ಯದರ್ಶಿ ಎಸ್.ಪಿ. ಮಹೇಶ್, ಬಾಹುಬಲಿ ಶಿಕ್ಷಣ ಸಂಸ್ಥೆಗಳ ಕಾರ್ಯದರ್ಶಿ ಬಬನ್ ಪಾರಿಸ ದತವಾಡೆ, ಪ್ರಾಂಶುಪಾಲ ಡಾ. ಸುನಿಲ್ ಕುಮಾರ್, ಡಾ. ಎಸ್.ದಿನೇಶ್, ಕೃಷಿ ಇಲಾಖೆ ಸಿಬ್ಬಂದಿ ಅರ್ಪಿತಾ ಮುಂತಾದವರಿದ್ದರು

# ಮನೆಗಳವು, ಚಿನ್ನಾಭರಣ ಕಳವು ಪ್ರಕರಣ ಬೇಧಿಸಿದ ಪೊಲೀಸರು

## ಹೊಳೆನರಸೀಪುರ ಖಾಕಿ ಭರ್ಜರಿ ಕಾರ್ಯಾಚರಣೆ | ಗಾಂಜಾ ಘಾಟಿನಲ್ಲಿ ಸ್ಥಳೀಯರ ಕೈವಾಡ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಹೊಳೆನರಸೀಪುರ ನಗರ ಠಾಣೆ ವ್ಯಾಪ್ತಿಯಲ್ಲಿ ದಾಖಲಾಗಿದ್ದ ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಪ್ರತ್ಯೇಕ 3 ಸರಗಳವು, ತೇರಣ್ಯದಲ್ಲಿ ಮನೆಗಳವು ಹಾಗೂ ಗಾಂಜಾ ಮಾರಾಟ ಯತ್ನ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಟಾಧಿಕಾರಿ ಮೊಹಮ್ಮದ್ ಸುಜೀತಾ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಚಿನ್ನಾಭರಣ ಕದಿಯುತ್ತಿದ್ದ ಆಂಧ್ರಪ್ರದೇಶದ ನಾಲ್ವರು ಮಹಿಳೆಯರನ್ನು ಬಂಧಿಸಿ 6.38 ಲಕ್ಷ ರೂ. ಮೌಲ್ಯದ ಚಿನ್ನಾಭರಣ ವಶಪಡಿಸಿಕೊಳ್ಳಲಾಗಿದೆ. ಚಿತ್ತೂರು ಜಿಲ್ಲೆ ಕುಪ್ಪಂ ಗ್ರಾಮದ ಶಶಿ (35), ಮಾಧವಿ (40), ಅಕಿಲ (30) ಹಾಗು ವಿದ್ಯಾ (29) ಬಂಧಿತರು. ಎಲ್ಲರೂ ಒಂದೇ ಗ್ರಾಮದವರಾಗಿದ್ದು ಕಳ್ಳತನವನ್ನು ಫ್ಯಾಷನ್ ಮಾಡಿಕೊಂಡಿದ್ದಾರೆ.

ಬಂಧಿತ ಶಶಿ ಹಾಗೂ ವಿದ್ಯಾ ವಿರುದ್ಧ ಬೆಂಗಳೂರಿನಲ್ಲಿ ಕಳ್ಳತನ ಪ್ರಕರಣ ದಾಖಲಾಗಿದೆ. ಮಾಧವಿ ಹಾಗೂ ಅಕಿಲ ಮೊದಲ ಪ್ರಕರಣದಲ್ಲಿ ಬಂಧನವಾಗಿದ್ದಾರೆ. ಶಶಿ ಗಾರ್ಮೆಂಟ್ಸ್ ಉದ್ಯೋಗಿಯಾಗಿದ್ದು ಉಳಿದ ಮೂವರು ಕ್ರಷರ್‌ಗಳಲ್ಲಿ ಕಲ್ಲು ಒಡೆಯುವ ಕೆಲಸ ಮಾಡಿಕೊಂಡಿದ್ದಾರೆ. ಬಂಧಿತರಿಂದ 35 ಗ್ರಾಂ ತೂಕದ ಚಿನ್ನದ ಸರ, 22 ಗ್ರಾಂ ತೂಕದ ನೆಕ್ಲೆಸ್, 5 ಗ್ರಾಂ ತೂಕದ ಬೆಳ್ಳಿ ಗಣಪತಿ ಡಾಲರ್ ಹಾಗೂ 29 ಗ್ರಾಂ ತೂಕದ ಚಿನ್ನದ ಸರ ವಶಪಡಿಸಿಕೊಳ್ಳಲಾಗಿದೆ ಎಂದರು.



### ಗಾಂಜಾ ಮಾರಾಟ ಜಾಲ ಸಕ್ರಿಯ

ಪಕ್ಕದ ರಾಜ್ಯದಿಂದ ಅಕ್ರಮವಾಗಿ ಗಾಂಜಾ ತಂದು ಜಿಲ್ಲೆಯಲ್ಲಿ ಮಾರಾಟ ಮಾಡುತ್ತಿರುವ ಪ್ರಕರಣ ಬೆಳಕಿಗೆ ಬಂದಿದ್ದು ಹೊಳೆನರಸೀಪುರದ ಪೆದ್ದನಹಳ್ಳಿ ಗೇಟ್ ಬಳಿ 11 ಲಕ್ಷ ರೂ. ಮೌಲ್ಯದ 23 ಕೆ.ಜಿ. ಗಾಂಜಾ ಹಾಗು ಮೂವರನ್ನು ಬಂಧಿಸಲಾಗಿದೆ ಎಂದು ತಿಳಿಸಿದರು.

ಕೆ.ಆರ್. ನಗರ ತಾಲ್ಲೂಕು ಭೇರ್ಯ ಗ್ರಾಮದ ಷಫೀವುಲ್ಲಾ ಖಾನ್ (38), ತುಮಕೂರು ಜಿಲ್ಲೆ ಗುಬ್ಬಿ ನಿವಾಸಿ ಕೈಸರ್ ಖಾನ್ (45) ಹಾಗು ಹೊಳೆನರಸೀಪುರದ ಹೆಚ್.ಎಸ್. ರೇಷ್ಮಾ (30) ಬಂಧಿತರು. ಜಿಲ್ಲೆಯಲ್ಲಿ ಗಾಂಜಾ ಬೆಳೆಯುವುದಿಲ್ಲ. ಪಕ್ಕದ ರಾಜ್ಯದಲ್ಲಿ ಅದನ್ನು ಖರೀದಿಸಿ ರೈಲು ಅಥವಾ ಬಸ್‌ಗಳಲ್ಲಿ ಸಂಶಯ ಬಾರದಂತೆ ತಂದು ಇಲ್ಲಿ ಮಾರಾಟ ಮಾಡುತ್ತಾರೆ. ಆರೋಪಿ ರೇಷ್ಮಾಳ ಸಹಾಯದಿಂದ ಉಳಿದ ಇಬ್ಬರು ಗಾಂಜಾ ಪದಾರ್ಥ ತಂದಿದ್ದರು. ಗಾಂಜಾ ಮಾರಾಟ ಪ್ರಕರಣದಲ್ಲೇ ಆಕೆಯ ಪತಿ ಸಂತೋಷ್ ವಿರುದ್ಧ ಈ ಮೊದಲು ಪ್ರಕರಣ ದಾಖಲಾಗಿದೆ. ಸ್ಥಳೀಯರ ಸಹಕಾರದಿಂದ ಹೊರ ಜಿಲ್ಲೆಯವರು ಬಂದು ಅಮಲು ಪದಾರ್ಥ ಮಾರಾಟ ಮಾಡುತ್ತಿದ್ದಾರೆ ಎಂದರು.

### ಗಾರೆ ಕೆಲಸಗಾರನ ಬಂಧನ

ಹೊಳೆನರಸೀಪುರ ತಾಲ್ಲೂಕು ತೇರಣ್ಯ ಗ್ರಾಮದ ನಂಜುಂಡಪ್ಪ ಎಂಬುವರ ಮನೆಯಲ್ಲಿ ಮೇ 28 ರಂದು ನಡೆದಿದ್ದ ಮನೆಗಳವು ಪ್ರಕರಣ ಸಂಬಂಧ ಆರೋಪಿಯನ್ನು ಬಂಧಿಸಿ 320 ಗ್ರಾಂ ತೂಕದ ಚಿನ್ನಾಭರಣ ವಶಪಡಿಸಿಕೊಳ್ಳಲಾಗಿದೆ ಎಂದು ಹೇಳಿದರು.

ಹುಬ್ಬಳ್ಳಿಯ ಮಹಮ್ಮದ್ ರಫೀಕ್ (45) ಬಂಧಿತ. ನಂಜುಂಡಪ್ಪ ಅವರ ಹೆಂಡತಿ ಪುಷ್ಪಲತಾ ಎಂದಿನಂತೆ ಮನೆಗೆ ಬೀಗ ಹಾಕಿ ಕೀಯನ್ನು ಹೊಸ್ತಿಲ ಬಳಿ ಇಟ್ಟು ಜಮೀನಿಗೆ ತೆರಳಿದ್ದರು. ಸಂಜೆ 4 ಗಂಟೆಗೆ ಮನೆಗೆ ಬಂದು ನೋಡಿದಾಗ ಮನೆ ಬಾಗಿಲು ಸುಸ್ಥಿತಿಯಲ್ಲಿತ್ತಾದರೂ ಒಳಬಾಗಿಲು ಹಾಗೂ ಬೀರು ಮುರಿದಿತ್ತು. ಮನೆಯಲ್ಲಿದ್ದ 320 ಗ್ರಾಂ ತೂಕದ ಚಿನ್ನಾಭರಣ ನಾಪತ್ತೆಯಾಗಿತ್ತು. ಈ ಸಂಬಂಧ ಕಾರ್ಯಾಚರಣೆ ನಡೆಸಿದ ವೇಳೆ ಮಹಮ್ಮದ್ ರಫೀಕ್ ಕಳವು ಮಾಡಿದ್ದಾನೆ ಎಂಬುದು ಗೊತ್ತಾಗಿದೆ. ಆತನನ್ನು ದಸ್ತಗಿರಿ ಮಾಡಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ತಿಳಿಸಿದರು.

ನಂಜುಂಡಪ್ಪ ಅವರ ಮನೆಯಿಂದ ಸ್ವಲ್ಪ ದೂರದಲ್ಲೇ ಕಟ್ಟಡ ಕಾಮಗಾರಿಗೆ ಗಾರೆ ಕೆಲಸಗಾರನಾಗಿ ಮಹಮ್ಮದ್ ಕೆಲಸ ಮಾಡಿಕೊಂಡಿದ್ದ. ನಂಜುಂಡಪ್ಪ ಹಾಗೂ ಪುಷ್ಪಲತಾ ಅವರ ಚಲನವಲನವನ್ನು ನಿತ್ಯ ಗಮನಿಸುತ್ತಿದ್ದ ಆತ ಅವರ ಮನೆಯಲ್ಲಿ ಲಕ್ಷಾಂತರ ರೂ. ಮೌಲ್ಯದ ಚಿನ್ನಾಭರಣ ಇರುವುದನ್ನು ಖಚಿತಪಡಿಸಿಕೊಂಡಿದ್ದ ಮಾತ್ರವಲ್ಲದೆ ಬೀಗದ ಕೀಯನ್ನು ಅಲ್ಲೇ ಇಟ್ಟಿರುತ್ತಾರೆಂಬುದನ್ನು ಖಚಿತಪಡಿಸಿಕೊಂಡು ಯಾರಿಗೂ ಗೊತ್ತಾಗದಂತೆ ಕೀ ತೆಗೆದು ಕಳವು ಮಾಡಿದ್ದ. ಕಳ್ಳತನದ ಬಳಿಕ ಆತ ಕೆಲಸಕ್ಕೆ ಬಾರದೆ ಇದ್ದುದರಿಂದ ಸ್ಥಳೀಯರಿಂದ ಮಾಹಿತಿ ಪಡೆದು ಆತನನ್ನು ವಶಕ್ಕೆ ಪಡೆಯಲಾಯಿತು ಎಂದರು.

# ಬಾಲಕಾರ್ಮಿಕ ಪದ್ಧತಿ ತಡೆಗೆ ಎಲ್ಲರೂ ಕೈ ಜೋಡಿಸಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸಾಮಾಜಿಕ ಪಿಡುಗಾಗಿರುವ ಬಾಲ ಕಾರ್ಮಿಕ ಪದ್ಧತಿ ತಡೆಗಟ್ಟಲು ಸಮುದಾಯದ ಸಹಭಾಗಿತ್ವ ಬಹುಮುಖ್ಯ. ಈ ನಿಟ್ಟಿನಲ್ಲಿ ಎಲ್ಲರೂ ಕೈ ಜೋಡಿಸುವ ಮೂಲಕ ಸಮಾಜದ ಏಳಿಗೆಗಾಗಿ ಕರ್ತವ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ. ಸತ್ಯಭಾಮ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಟಾಸ್ಕ್ ಫೋರ್ಸ್ ಸಭೆಯಲ್ಲಿ ಮಾತನಾಡಿದ ಅವರು, ಬಾಲ್ಯ ವಿವಾಹ, ಬಾಲ ಕಾರ್ಮಿಕ ಪದ್ಧತಿಯ ಕುರಿತು ಶಾಲೆಯಲ್ಲಿ ಪ್ರಾರ್ಥನೆಯ ಸಂದರ್ಭದಲ್ಲಿ ಅರಿವು ಮೂಡಿಸಿ ಎಂದರಲ್ಲದೆ, ಶಾಲೆಗಳಲ್ಲಿ ನಡೆಯುವ ಪೋಷಕರ ಸಭೆಯಲ್ಲಿಯೂ ಜಾಗೃತಿ ನಡೆಸಬೇಕು ಎಂದರು.

ವಾಹನಗಳ ಮೇಲೆ ಸ್ಟಿಕರ್ ಅಂಟಿಸಿ ಹೆಚ್ಚಿನ ಪ್ರಚಾರ ಮಾಡಲು ಮತ್ತು ಆಕಾಶವಾಣಿ ಮೂಲಕ ಅರಿವು ಮೂಡಿಸಬೇಕು. ಬಾಲ ಕಾರ್ಮಿಕ ಮಕ್ಕಳು ಅಥವಾ ಬಾಲ್ಯವಿವಾಹ ಪದ್ಧತಿ ಕಂಡು ಬಂದಲ್ಲಿ ಸಹಾಯವಾಣಿ ಸಂಖ್ಯೆ 1098 ಗೆ ಕರೆ ಮಾಡಬೇಕು.




## ಜಿಲ್ಲಾದ್ಯಂತ ಅಭಿಯಾನ

ಜಿಲ್ಲೆಯಾದ್ಯಂತ ಜೂ. 13 ರಿಂದ 30ರ ವರೆಗೆ ಬಾಲ ಹಾಗೂ ಕಿಶೋರ ಕಾರ್ಮಿಕರ ರಕ್ಷಣಾ ಅಭಿಯಾನ ಆಯೋಜಿಸಬೇಕು. ಜೂ. 12ಕ್ಕೆ ಜಿಲ್ಲೆಯಾದ್ಯಂತ ಎಲ್ಲಾ ಗ್ರಾಮ ಪಂಚಾಯಿತಿ, ಪುರಸಭೆ ಹಾಗೂ ನಗರಸಭೆ ವತಿಯಿಂದ ಕಸ ವಿಲೇವಾರಿ ವಾಹನಗಳಲ್ಲಿ ಉಚಿತವಾಗಿ ಬಾಲ ಹಾಗೂ ಕಿಶೋರ ಕಾರ್ಮಿಕ ವಿರೋಧಿ ಪದ್ಧತಿ ಕುರಿತು ಜಿಂಗಲ್ ಮೂಲಕ ಘೋಷಣೆ ಕೂಗಿಸಲು ಸೂಚಿಸಿದರು.

ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಸದಸ್ಯೆ ಬಿ.ಕೆ. ದಾಕ್ಷಾಯಿಣಿ, ಲೀಲಾವತಿ, ಕೆ.ಟಿ. ಜಯಶ್ರೀ, ಜಿಲ್ಲಾ ಕಾರ್ಮಿಕ ಅಧಿಕಾರಿ ಯಮುನಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಅನಿಲ್ ಹಾಗೂ ಇತರರಿದ್ದರು.

## 13 ಮಕ್ಕಳಿಗೆ ಶಾಲೆ ಇಷ್ಟವಿಲ್ಲ

ಶಾಲೆಯಿಂದ ಹೊರಗುಳಿದ 90 ಮಕ್ಕಳಲ್ಲಿ 48 ಮಕ್ಕಳು ಕೇರಳ, ಆಂಧ್ರ, ಅಸ್ಸಾಂ, ಬಿಹಾರ್‌ಗೆ ವಾಪಾಸ್ ಹೋಗಿದ್ದಾರೆ. 29 ಮಕ್ಕಳು ಶಾಲೆಗೆ ವಾಪಾಸ್ ಬಂದಿದ್ದಾರೆ. 13 ಮಕ್ಕಳು ಶಾಲೆಗೆ ಹೋಗಲು ಇಷ್ಟವಿಲ್ಲ ಎಂದು ಹೇಳಿದ್ದಾರೆ ಎಂದು ಕಾರ್ಮಿಕ ಅಧಿಕಾರಿ ಸಭೆಗೆ ಮಾಹಿತಿ ನೀಡಿದರು.

ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನದ ಪ್ರಯುಕ್ತ ಜೂನ್ 12 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲೆಯ ಎಲ್ಲಾ ಸರ್ಕಾರಿ ನೌಕರರು ಕೆಲಸ ನಿರ್ವಹಿಸುತ್ತಿರುವ ಸ್ಥಳಗಳಲ್ಲಿಯೇ ಒಟ್ಟಾಗಿ ಸೇರಿ ಪ್ರಮಾಣ ವಚನ ಸ್ವೀಕರಿಸುವ ಕಾರ್ಯವನ್ನುಆಯೋಜಿಸುವಂತೆ ಜಿಲ್ಲೆಯ ಎಲ್ಲಾ ಇಲಾಖೆಯ ಮುಖ್ಯಸ್ಥರಿಗೆ ಸೂಚನೆ ನೀಡಿದರು.

ಪ್ರತಿಗ್ರಾಮಗಳಲ್ಲಿ ಗ್ರಾಮ ಪಂಚಾಯತಿ ವತಿಯಿಂದಜೂನ್.12ರಂದು ಬಾಲ ಹಾಗೂ ಕಿಶೋರಕಾರ್ಮಿಕ ವಿರೋಧಿ ಪದ್ಧತಿಯಕುರಿತುಡಂಗೂರವನ್ನು ಸಾರಿಸುವಂತೆ ನಿರ್ದೇಶಿಸಿದರು.

ಪ್ರತಿಗ್ರಾಮ/ತಾಲ್ಲೂಕಿನ ಶಾಲಾ-ಕಾಲೇಜು ಹಾಗೂ ವಿದ್ಯಾರ್ಥಿಗಳಿಂದ ಜಾಥಾ ಕಾರ್ಯಕ್ರಮ ಆಯೋಜಿಸುವುದು. ಬಾಲ ಹಾಗೂ ಕಿಶೋರ ಕಾರ್ಮಿಕ ವಿರೋಧಿ ಪದ್ಧತಿ ಕುರಿತು ಘೋಷಣೆಗಳನ್ನು ಕೂಗಿಸುವುದರ ಕುರಿತು ನಿರ್ದೇಶನ ನೀಡಬೇಕು ಎಂದು ಜಿಲ್ಲಾಧಿಕಾರಿ ಹೇಳಿದರು.

ಬಾಲ ಹಾಗೂ ಕಿಶೋರ ಕಾರ್ಮಿಕ ಪ್ರಕರಣಗಳನ್ನು ಪತ್ತೆ ಹಚ್ಚಿದಾಖಲು ಮಾಡಿ, ಮುಖ್ಯವಾಹಿನಿಗೆ ಸೇರಿ ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿ ಯಲ್ಲಿ ಶೇ.75ಕ್ಕಿಂತ ಹೆಚ್ಚಗೆ ಅಂಕ ಪಡೆದ ಮಕ್ಕಳಿಗೆ ಕಾರ್ಯಕ್ರಮದಲ್ಲಿ ರೂ.2000ಗಳ ಪ್ರೋತ್ಸಾಹ ಧನ ನೀಡಲು ಕ್ರಮವಹಿಸಲು ಅಧಿಕಾರಿಗಳಿಗೆ ತಿಳಿಸಿದರು.

# ದೇಶಾಭಿಮಾನ ಮೆರೆದ ಸಾವಿರಾರು ವಿದ್ಯಾರ್ಥಿಗಳು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ಆಪರೇಷನ್ ಸಿಂಧೂರ ಕಾರ್ಯಾಚರಣೆ ಸಂಭ್ರಮದ ಅಂಗವಾಗಿ ಪಟ್ಟಣದಲ್ಲಿ ಅಪಾರ ಸಂಖ್ಯೆಯ ವಿದ್ಯಾರ್ಥಿಗಳು, ಶಿಕ್ಷಕರು, ದೇಶಾಭಿಮಾನಿಗಳು ರಾಷ್ಟ್ರಧ್ವಜ ಹಿಡಿದು ಸಂಭ್ರಮದ ತಿರಂಗಾ ಯಾತ್ರೆ ನಡೆಸಿದರು.

ಬುಧವಾರ ಪಟ್ಟಣದ ಕೋಟೆ ಕೊತ್ತಲು ಗಣಪತಿ ರಸ್ತೆ ಮುಂಭಾಗದಿಂದ ಹೊರಟ ಯಾತ್ರೆಗೆ ತಹಸೀಲ್ದಾರ್ ಕೆ.ಸಿ. ಸೌಮ್ಯ, ಗ್ರೇಡ್2 ತಹಸೀಲ್ದಾರ್ ಸಿ. ಸ್ವಾಮಿ ಅವರು ರಾಷ್ಟ್ರಧ್ವಜಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಚಾಲನೆ ನೀಡಿದರು.

ಸಂಘಟಕರು ಮೆರವಣಿಗೆ ತಂದಿದ್ದ ಅರ್ಧ ಕಿ.ಮೀ. ಉದ್ದದ ರಾಷ್ಟ್ರಧ್ವಜವನ್ನು ಒಂದೂವರೆ ಸಾವಿರಕ್ಕೂ ಅಧಿಕ ಸಂಖ್ಯೆಯ ವಿದ್ಯಾರ್ಥಿಗಳು ತಲೆಮೇಲೆ ಹೊತ್ತು ದೇಶಾಭಿಮಾನದ ಘೋಷಣೆಗಳನ್ನು ಕೂಗುತ್ತಾ ಸಾಗಿದರು. ಕೋಟೆ- ಪೇಟೆ ಮಾರ್ಗವಾಗಿ ಸಾಗಿದ ತಿರಂಗಾ ಯಾತ್ರೆ ಸಂತೆಮರೂರು ವೃತ್ತದಿಂದ ಬೈಪಾಸ್ ಮೂಲಕ ತೆರಳಿ ಸಂತೇಮಾಳದ ರಸ್ತೆಯ ಮೂಲಕ ಸಂಚರಿಸಿ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ವರೆಗೆ ಸಾಗಿ ಸಮಾವೇಶಗೊಂಡಿತು.


ಯಾತ್ರೆಯಲ್ಲಿ ಭಾಗವಹಿಸಿದ್ದ ವಿವಿಧ ಶಾಲಾ ಕಾಲೇಜಿನ ಒಂದೂವರೆ ಸಾವಿರ ವಿದ್ಯಾರ್ಥಿಗಳು ರಾಷ್ಟ್ರಧ್ವಜ ಹಿಡಿದು ದೇಶಪ್ರೇಮ ಮೆರೆದರು. ಭಾರತ್ ಮಾತಾಕೀ ಜೈ ಘೋಷಣೆ ಕೂಗಿ ಸಂಭ್ರಮಿಸಿದರು.ಸುಮಾರು ಒಂದುಕೀಮಿ ದೂರದತನಕ ತಿರಂಗಾಯಾತ್ರೆ ನೋಡುಗರ ಕಣ್ಮನ ಸೆಳೆಯಿತು. ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ರಾಷ್ಟ್ರಧ್ವಜವನ್ನು ಹೊತ್ತು ವಿದ್ಯಾರ್ಥಿಗಳು, ಸಾರ್ವಜನಿಕರು ಸಾಗಿದ್ದು ದಾಖಲೆ ಸೃಷ್ಟಿಸಿತು.

ಯಾತ್ರೆಗೂ ಮುನ್ನ ಮಾಜಿ ಸೈನಿಕ ಸುದೀನ್ ಕುಮಾರ್ ಅವರನ್ನು ಸನ್ಮಾನಿಸಲಾಯಿತು. ಮುಖಂಡರಾದ ಮಂಜುನಾಥ್, ಕಾಂತರಾಜು, ಚಂದು, ರವಿಕುಮಾರ್, ಶ್ರೀನಿವಾಸ್, ಸುರೇಶ್, ಪಪಂ ಸದಸ್ಯರಾದ ರಮೇಶ್ ವಾಟಾಳ್, ರಶ್ಮಿ ಇತರರು ಪಾಲ್ಗೊಂಡಿದ್ದರು.

# ಮೂತ್ರ ವಿಸರ್ಜನೆಗೆ ಬಯಲೇ ಗತಿ

ಬೇಲೂರು: ಪಟ್ಟಣದ ತಾಲ್ಲೂಕು ಕಚೇರಿಯಲ್ಲಿ ಶೌಚಗೃಹ ವ್ಯವಸ್ಥೆ ಇಲ್ಲದೆ ಕಚೇರಿ ಕೆಲಸಕ್ಕೆ ನಿತ್ಯ ಬರುವ ಸಾರ್ವಜನಿಕರು ಪರದಾಡುವಂತಾಗಿದೆ.

ರೈತರು ಹೆಚ್ಚಾಗಿ ಬರುವ ಸ್ಥಳ ಇದಾಗಿದ್ದು ಕಂದಾಯ ಇಲಾಖೆಯ ಮುಖ್ಯ ಕಚೇರಿಯಲ್ಲಿ ಪುರುಷರಿಗೆ ಹಾಗೂ ಮಹಿಳೆಯರಿಗೆ ಮೂತ್ರ ವಿಸರ್ಜನೆಗೆ ಸ್ಥಳ ಇಲ್ಲದಂತಾಗಿದೆ. ಕಚೇರಿ ಹಿಂಬದಿಯಲ್ಲಿ ನಾಮಕಾವಾಸ್ತೆಗೆ ಶೌಚಾಲಯವಿದ್ದು ಗಬ್ಬು ನಾರುತ್ತಿದೆ. ಮೂತ್ರ ವಿಸರ್ಜನೆಗೆಂದು ಅಳವಡಿಸಿರುವ ಪೈಪ್‌ಗಳಲ್ಲಿ ಕಸ ಇತರೆ ಕಲ್ಮಶ ತುಂಬಿದ್ದು ಕೊಠಡಿಯೊಳಗೆಲ್ಲ ಸಹಿಸಲಾಗದಷ್ಟು ವಾಸನೆ ಹರಡಿದೆ. ಹೀಗಾಗಿ ಜನರು ಬಯಲು ಶೌಚಕ್ಕೆ ಮೊರೆ ಹೋಗಬೇಕಾಗಿದೆ.



ಪುರುಷರ ಶೌಚಾಲಯದ ಕೊಠಡಿಗೆ ಹೊಂದಿಕೊಂಡಂತಿರುವ ಮಹಿಳೆಯರ ಕೊಠಡಿ ಪರಿಸ್ಥಿತಿಯೂ ಇದೆ ಆಗಿದೆ. ಕ್ರಿಮಿಕೀಟಗಳು, ಸೊಳ್ಳೆಗಳ ಆವಾಸ ಸ್ಥಾನವಾಗಿದ್ದು ರೋಗ ರುಜಿನಗಳಿಗೆ ಆಹ್ವಾನ ನೀಡುತ್ತಿದೆ.

## ಮಹಿಳಾ ಸಿಬ್ಬಂದಿಗೆ ಮಾತ್ರ ಶೌಚಾಲಯ

ತಾಲ್ಲೂಕು ಕಚೇರಿ ಒಳಗೊಂದು ಮಹಿಳಾ ನೌಕರರಿಗೆ ಮಾತ್ರ ಮಿಸಲಾಗಿರುವ ಶೌಚಾಲಯವಿದ್ದು ಕಚೇರಿಗೆ ಆಗಮಿಸುವ ಹೆಣ್ಣು ಮಕ್ಕಳಿಗೆ, ಮಹಿಳೆರಿಗೆ ಪ್ರವೇಶವಿಲ್ಲ. ತಾಲ್ಲೂಕು ಕಚೇರಿಗೆ ಬರುವ ಮಹಿಳೆಯರು ಹಾಗೂ ಪುರುಷರು ಮತ್ತು ಪುರುಷ ನೌಕರರು ಮೂತ್ರ ವಿಸರ್ಜನೆಗೆ ಬಯಲನ್ನೆ ಅವಲಂಬಿಸಬೇಕಾದ ಪರಿಸ್ಥಿತಿ ಇದೆ.

ಎಲ್ಲೆಂದರಲ್ಲಿ ಪುರುಷರು ನಾಚಿಕೆಪಡದೆ ಜಲಭಾದೆ ತೀರಿಸಿಕೊಳ್ಳುತ್ತಾರೆ. ಆದರೆ ಮಹಿಳೆಯರು ಏನು ಮಾಡಬೇಕೆಂಬ ಪ್ರಶ್ನೆ ಉದ್ಭವವಾಗಿದೆ. ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತೆ ಕಾಪಾಡುವಂತೆ ಸಲಹೆ ನೀಡುವ ಹಾಗೂ ಅಸುಚಿತ್ವ ಸ್ಥಳಗಳ ಪರಿಶೀಲಿಸಿ ಬುದ್ಧಿ ಹೇಳುವ ಕಂದಾಯ ಇಲಾಖೆ ನೌಕರರು ತನ್ನ ಕಚೇರಿಯಲ್ಲೇ ಅಶುಚಿತ್ವ ಕಾಡುತ್ತಿದ್ದರೂ ಹಾಗೂ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ಸಾಧ್ಯವಾಗದೆ ಕೈ ಕಟ್ಟಿ ಕುಳಿತಿದ್ದಾರೆ.

# ಜನನ-ಮರಣ ನೋಂದಣಿಗೆ ಒತ್ತು ನೀಡಿ: ಜಿಲ್ಲಾಧಿಕಾರಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜನನ ಮತ್ತು ಮರಣ ನೋಂದಣಿಗೆ ಒತ್ತು ನೀಡಿ ಶೇಕಡಾ ನೂರರಷ್ಟು ಪ್ರಗತಿ ಸಾಧಿಸಬೇಕು ಎಂದು ಜಿಲ್ಲಾಧಿಕಾರಿ ಸಿ. ಸತ್ಯಭಾಮ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ನಾಗರಿಕ ನೋಂದಣಿ ಪದ್ಧತಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆಸ್ಪತ್ರೆಯಲ್ಲಿ ಮಗು ಜನಿಸಿದ ತಕ್ಷಣ ಒಂದು ಉಚಿತ ಜನನ ಪ್ರಮಾಣ ಪತ್ರದೊಂದಿಗೆ ತಾಯಿಯೊಂದಿಗೆ ಮನೆಗೆ ಕಳುಹಿಸುವ ಧ್ಯೇಯೋದ್ದೇಶ ಸರ್ಕಾರದ್ದಾಗಿದ್ದು, ಈ ನಿಟ್ಟಿನಲ್ಲಿ ಉಪ ನೋಂದಣಿ ಘಟಕಗಳನ್ನು ಆರಂಭಿಸಲಾಗಿದೆ ಎಂದು ತಿಳಿಸಿದರು.

ಅನಗತ್ಯ ನೋಂದಣಿಗಳನ್ನು ತಪ್ಪಿಸಲು ಜನನ/ಮರಣ ಘಟಿಸಿದ ಸ್ಥಳದಲ್ಲಿಯೇ ನೋಂದಣಿಯಾಗುವ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು ಹಾಗೂ ಜನನ/ಮರಣ ಎಲ್ಲಿ ಸಂಭವಿಸುತ್ತದೋ ಆ ವ್ಯಾಪ್ತಿಯ ನೋಂದಣಿ ಘಟಕದಲ್ಲಿ ಜನನ/ಮರಣ ಪ್ರಮಾಣ ಪತ್ರ ಪಡೆಯಲು ಸಾರ್ವಜನಿಕರಿಗೆ ಅರಿವು ಮೂಡಿಸಬೇಕು ಎಂದು ಹೇಳಿದರು.




ದತ್ತು ಪಡೆದ ಮಕ್ಕಳ ಮಾಹಿತಿ ಬಹಿರಂಗಪಡಿಸುವಂತಿಲ್ಲ. ಈ ನಿಟ್ಟಿನಲ್ಲಿ ಎಚ್ಚರಿಕೆ ವಹಿಸಬೇಕು. ಜನನ/ಮರಣ 21 ದಿನಗಳ ವರೆಗೆ ಗ್ರಾಮ ಪಂಚಾಯಿತಿ ಕಾರ್ಯದರ್ಶಿ/ಸ್ಥಳೀಯ ಸಂಸ್ಥೆಗಳ ನೋಂದಣಾಧಿಕಾರಿಗಳು/ವೈದ್ಯಾಧಿಕಾರಿಗಳು ನೋಂದಣಿ ಶುಲ್ಕ ವಿಧಿಸುವಂತಿಲ್ಲ.

ಜನನದ 30 ದಿನಗಳ ನಂತರ ಮತ್ತು ಮರಣದ ಒಂದು ವರ್ಷದ ಒಳಗೆ ನೋಂದಣಿದಾರರು ತಹಶೀಲ್ದಾರರು/ಆಯುಕ್ತರು/ಮುಖ್ಯಾಧಿಕಾರಿಗಳಿಂದ ಲಿಖಿತ ಆದೇಶವನ್ನು ಪಡೆದು ನೋಂದಾಯಿಸಬೇಕಾಗಿರುತ್ತದೆ. ಅದಕ್ಕೆ 50 ಶುಲ್ಕ ನಿಗದಿಪಡಿಸಲಾಗಿದೆ.

ಜನನ-ಮರಣ ನೋಂದಣಿಗೆ ಸಂಬಂಧಿಸಿದಂತೆ ಅಧಿಸೂಚಕರಾಗಿ ನೇಮಿಸಲಾಗಿರುವಗ್ರಾಮ ಸಹಾಯಕರು, ಅಂಗನವಾಡಿಕಾರ್ಯಕರ್ತರು, ಆಶಾ ಕಾರ್ಯಕರ್ತರು, ಶಾಲಾ ಮುಖ್ಯೋಪಾಧ್ಯಾಯರು ಹಂತದಲ್ಲಿ ಜನನ ಮರಣ ನೋಂದಣಿ ಬಗ್ಗೆ ಜನರಿಗೆ ಜಾಗೃತಿ ಮೂಡಿಸುವಕಾರ್ಯ ನಿರ್ವಹಿಸಬೇಕಾಗಿದೆ ಎಂದು ತಿಳಿಸಿದರು.

ಯಾವುದಾದರೂ ಸಮಸ್ಯೆಗಳು ಕಂಡು ಬಂದಲ್ಲಿಜಿಲ್ಲಾಜನನ ಮರಣ ನೋಂದಣಾಧಿಕಾರಿಗಳಾದ ಜಿಲ್ಲಾಧಿಕಾರಿಗೆ ಮೇಲ್ಮನವಿ ಸಲ್ಲಿಸಬಹುದು ಎಂದು ತಿಳಿಸಿದರು.

ಬೆಳೆ ಕಟಾವು ಸಮೀಕ್ಷೆಯನ್ನು ನಿಗದಿತ ಅವಧಿಯೊಳಗೆ ಕ್ರಮಬದ್ಧವಾಗಿ ಮಾಡಿಸಲು ಗಮನಹರಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು. ಕ್ರಮಬದ್ಧವಾಗಿ ಮಾಡದಿದ್ದಲ್ಲಿರೈತರಿಗೆ ನಷ್ಟಉಂಟಾಗಲಿದೆ ಈ ನಿಟ್ಟಿನಲ್ಲಿ ಎಚ್ಚರಿಕೆವಹಿಸಿ ಎಂದು ತಿಳಿಸಿದರು.

ಜಿಲ್ಲಾಜಂಟಿ ಕೃಷಿ ನಿರ್ದೇಶಕ ಪಿ. ರಮೇಶ್‌ಕುಮಾರ್, ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕಿ ಮಂಗಳ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಅನೀಲ್, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಶಾಝಿಯಾ ನಾರ್ ಹಾಗೂ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

# ಇತಿಹಾಸದಲ್ಲಿ ಈ ದಿನ

## ಜೂನ್ -6

**1674:** ಛತ್ರಪತಿ ಶಿವಾಜಿ ಮಹಾರಾಜರ ರಾಜ್ಯಾಭಿಷೇಕ, ರೈಗಡ ಕೋಟೆಯಲ್ಲಿ ಅದ್ದೂರಿಯಾಗಿ ರಾಜ್ಯಾಭಿಷೇಕಗೊಂಡರು. ಈ ಕಾರ್ಯಕ್ರಮವು ಹಿಂದು ಸಂಪ್ರದಾಯದ ಪ್ರಕಾರ ಜೇಷ್ಠ ಮಾಸದ ಶುಕ್ಲ ಪಕ್ಷದ ದಿನಾಂಕ 13ರಂದು ನಡೆಯಿತು. ಈ ರಾಜ್ಯಾಭಿಷೇಕವು ಮರಾಠ ಸಾಮ್ರಾಜ್ಯದ ಸ್ಥಾಪನೆಯ ಪ್ರಮುಖ ಕ್ಷಣವಾಗಿತ್ತು.

**1984:** ಆಪರೇಷನ್ ಬ್ಲೂಸ್ಟಾರ್, ಭಾರತೀಯ ಸೇನೆ ಅಮೃತಸರದ ಗೋಲ್ಡನ್ ಟೆಂಪಲ್‌ನಲ್ಲಿ ಆಪರೇಷನ್ ಬ್ಲೂಸ್ಟಾರ್ ನಡೆಸಿತು. ಈ ಕಾರ್ಯಾಚರಣೆಯಲ್ಲಿ ಜರ್ನೈಲ್ ಸಿಂಗ್ ಭಿಂದ್ರಾನ್‌ವಾಲೆ ಮತ್ತು ಇತರರು ಹತರಾದರು. ಈ ಘಟನೆ ಸಿಖ್ ಸಮುದಾಯದಲ್ಲಿ ಆಘಾತವನ್ನುಂಟುಮಾಡಿತು.

**1981:** ಬಿಹಾರದ ರೈಲು ಅಪಘಾತ, ಬಿಹಾರದ ಬಾಗ್ಮತಿ ನದಿಯಲ್ಲಿ ರೈಲು ಪಲ್ಟಿಯಾಗಿ ಸುಮಾರು 500ಕ್ಕೂ ಹೆಚ್ಚು ಪ್ರಯಾಣಿಕರು ಸಾವಿಗೀಡಾದರು. ಇದು ಭಾರತದ ಇತಿಹಾಸದಲ್ಲಿಯೇ ಭೀಕರವಾದ ರೈಲು ಅಪಘಾತಗಳಲ್ಲಿ ಒಂದಾಗಿದೆ.

**1966:** ರೂಪಾಯಿ ಮೌಲ್ಯ ಇಳಿಕೆ, ಇಂದಿರಾ ಗಾಂಧಿಯವರ ನೇತೃತ್ವದ ಸರ್ಕಾರ ಭಾರತೀಯ ರೂಪಾಯಿಯ ಮೌಲ್ಯವನ್ನು ಶೇ. 57 ಇಳಿಸಿತು. ಈ ನಿರ್ಧಾರ ಆರ್ಥಿಕ ಕ್ಷೇತ್ರದಲ್ಲಿ ಮಹತ್ವಪೂರ್ಣ ಪರಿಣಾಮ ಉಂಟುಮಾಡಿತು.

**1899:** ಶಿವಕಾಶಿ ಗಲಭೆ, ಶಿವಕಾಶಿಯಲ್ಲಿ ನಾಡಾರ್ ಮತ್ತು ಮರಾವರ್ ಸಮುದಾಯಗಳ ನಡುವೆ ಗಲಭೆ ಸಂಭವಿಸಿತು. ಈ ಗಲಭೆಯಲ್ಲಿ ಹಲವರು ಗಾಯಗೊಂಡರು ಮತ್ತು ಆಸ್ತಿ ಹಾನಿ ಸಂಭವಿಸಿತು.

### ಜನನ

**1929:** ಸುನೀಲ್ ದತ್, ಹಿಂದಿ ಚಿತ್ರರಂಗದ ಪ್ರಸಿದ್ಧ ನಟ, ನಿರ್ಮಾಪಕ, ನಿರ್ದೇಶಕ ಮತ್ತು ರಾಜಕಾರಣಿ. 2004-2005ರಲ್ಲಿ ಯುವ ವ್ಯವಹಾರಗಳು ಮತ್ತು ಕ್ರೀಡಾ ಕೇಂದ್ರ ಸಚಿವರಾಗಿದ್ದರು. ಅವರ ಪುತ್ರ ಸಂಜಯ್ ದತ್ ಕೂಡ ಪ್ರಸಿದ್ಧ ನಟ.

**1988:** ನೆಹಾ ಕಕ್ಕರ್, ಜನಪ್ರಿಯ ಭಾರತೀಯ ಪ್ಲೇಬ್ಯಾಕ್ ಗಾಯಕಿ, ಹಲವಾರು ಹಿಟ್ ಹಾಡುಗಳನ್ನು ಹಾಡಿದ್ದಾರೆ. ಅವರು ಸಂಗೀತ ರಿಯಾಲಿಟಿ ಶೋಗಳಲ್ಲಿಯೂ ತೀರ್ಪುಗಾರರಾಗಿ ಕಾರ್ಯನಿರ್ವಹಿಸಿದ್ದಾರೆ.

**1986:** ಭಾವನಾ, ಮಲಯಾಳಂ ಚಿತ್ರರಂಗದ ಪ್ರಮುಖ ನಟಿ, ತಮಿಳು, ತೆಲುಗು ಮತ್ತು ಕನ್ನಡ ಚಿತ್ರಗಳಲ್ಲಿಯೂ ಅಭಿನಯಿಸಿದ್ದಾರೆ.

**1983:** ರಕ್ಷಿತ್ ಶೆಟ್ಟಿ, ಕನ್ನಡ ಚಿತ್ರರಂಗದ ನಟ, ನಿರ್ದೇಶಕ ಮತ್ತು ನಿರ್ಮಾಪಕ, ಉಳಿದವರು ಕಂಡಂತೆ ಮತ್ತು ಕಿರಿಕ್ ಪಾರ್ಟಿ, ಚಾರ್ಲಿ 777 ಚಿತ್ರಗಳ ಮೂಲಕ ಖ್ಯಾತಿ ಪಡೆದಿದ್ದಾರೆ.

**1936:** ಡಿ. ರಾಮನಾಯುಡು, ಭಾರತದ ಪ್ರಮುಖ ಚಿತ್ರ ನಿರ್ಮಾಪಕ, ಸುರೇಶ್ ಪ್ರೊಡಕ್ಷನ್ಸ್ ಸ್ಥಾಪಕರು.

**1981:** ಮಾಸ್ತಿ ವೆಂಕಟೇಶ ಅಯ್ಯಂಗಾರ್, ಪ್ರಸಿದ್ಧ ಕನ್ನಡ ಸಾಹಿತಿ, ಮಾಸ್ತಿ ಎಂಬ ಹೆಸರಿನಿಂದ ಪ್ರಸಿದ್ಧರಾಗಿದ್ದಾರೆ. ಅವರು ಜ್ಞಾನಪೀಠ ಪ್ರಶಸ್ತಿಯನ್ನು ಪಡೆದಿದ್ದಾರೆ.

### ಮರಣ

**1984:** ಜರ್ನೈಲ್ ಸಿಂಗ್ ಭಿಂದ್ರಾನ್‌ವಾಲೆ, ಸಿಖ್ ಧರ್ಮದ ಧಾರ್ಮಿಕ ನಾಯಕ. ಆಪರೇಷನ್ ಬ್ಲೂ ಸ್ಟಾರ್ ಸಂದರ್ಭದಲ್ಲಿ ಅಮೃತಸರದ ಗೋಲ್ಡನ್ ಟೆಂಪಲ್‌ನಲ್ಲಿ ಸಾವಿಗೀಡಾದರು.

**2015:** ಆರ್ಥಿ ಅಗರ್ವಾಲ್, ತೆಲುಗು ಚಿತ್ರರಂಗದ ನಟಿ.

# ನಾಳೆ ಕಸಾಪ ಭವನದಲ್ಲಿ ಶ್ರವಣ ತಪಾಸಣೆ

ಹಾಸನ: ನಗರದ ರೋಟರಿ ಕ್ಲಬ್ ಆಫ್ ಸೆಂಟ್ರಲ್ ನೇತೃತ್ವದಲ್ಲಿ ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ಟೀಮ್ ಈಶ್ವರ್ ಮಲ್ಪೆ ಸಹಯೋಗದೊಂದಿಗೆ ಜೂ.7 ರಂದು ಉಚಿತ ಕಿವಿಯ ಶ್ರವಣ ತಪಾಸಣೆ ಹಾಗೂ ರಿಯಾಯಿತಿ ದರದಲ್ಲಿ ಶ್ರವಣ ಯಂತ್ರಗಳ ವಿತರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆ ವರೆಗೆ ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಆವರಣದಲ್ಲಿ ತಪಾಸಣೆ ಕಾರ್ಯಕ್ರಮ ನಡೆಯಲಿದೆ.

ಟೀಮ್ ಈಶ್ವರ್ ಮಲ್ಪೆಯವರು ಅನೇಕ ಸಾಮಾಜಿಕ ಕಾರ್ಯ ಮುಂದುವರಿಸಿಕೊಂಡು ಬರುತ್ತಿದ್ದು, ಈಗ ನಾವು ಶ್ರವಣದ ಸಮಸ್ಯೆಯಿಂದ ಬಳಲುತ್ತಿರುವ ರೋಗಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಉಚಿತ ಶಿಬಿರ ಮಾಡಲಾಗುತ್ತಿದೆ.

ಕೇಳಿಸಿಕೊಳ್ಳುವ ಸಮಸ್ಯೆಯಿಂದ ಬಳಲುತ್ತಿರುವ ರೋಗಿಗಳಿಗೆ ನಮ್ಮ ಸಂಸ್ಥೆಯಾದ ಟೀಮ್ ಈಶ್ವರ್ ಮಲ್ಪೆಯವರು ಶ್ರವಣ ಯಂತ್ರಕ್ಕೆ ಆಗುವ ವೆಚ್ಚದ ಶೇ.40 ರಷ್ಟು ಮೊತ್ತವನ್ನು ಭರಿಸುತ್ತಿದ್ದಾರೆ.

ರೋಗಿಗಳು ಈ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕಾಗಿ ಕೋರಲಾಗಿದೆ. ಯಾರೆಲ್ಲ ಕೇಳಿಸಿಕೊಳ್ಳುವ ಸಮಸ್ಯೆಯಿಂದ ಬಳಲುತ್ತಿದ್ದಾರೋ ಅಂಥವರನ್ನು ಶಿಬಿರಕ್ಕೆ ಕರೆತಂದು ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವಂತೆ ಕೋರಲಾಗಿದೆ.

ಶಿಬಿರದಲ್ಲಿ ಭಾಗಿಯಾಗುವವರಿಗೆ ನೋಂದಣಿ ಕಡ್ಡಾಯವಾಗಿದೆ. 9902344399 ಈ ನಂಬರಿಗೆ ಕರೆ ಮಾಡಿ ನೋಂದಾಯಿಸಿ ಕೊಳ್ಳಬಹುದಾಗಿದೆ.ಹಿರಿಯರಿಗೆ ಮೊದಲ ಆದ್ಯತೆ ಇದೆ. ಶ್ರವಣ ಪರೀಕ್ಷೆಯ ಯಾವುದಾದರೂ ಹಳೆಯ ವರದಿ(ಓಲ್ಡ್ ರಿಪೋರ್ಟ್) ಇದ್ದರೆ ಜೊತೆಯಲ್ಲಿ ತರಬೇಕು, ಮೊದಲು ನೋಂದಾಯಿಸಿಕೊಳ್ಳುವ 40 ಜನರು ಈ ಸೌಲಭ್ಯ ಬಳಸಿಕೊಳ್ಳಬಹುದು. ಅಂತಾರಾಷ್ಟ್ರೀಯ ಸಂಸ್ಥೆಯಲ್ಲಿ ಅನುಭವ ಪಡೆದಿರುವ ವೈದ್ಯರು ಶಿಬಿರದಲ್ಲಿ ಪಾಲ್ಗೊಳ್ಳಲಿದ್ದಾರೆ. ಮಾಹಿತಿಗಾಗಿ 9902344399 ಇಲ್ಲಿಗೆ ಸಂಪರ್ಕಿಸಲು ಕೋರಿದೆ.

# ಸ್ವಉದ್ಯೋಗ ಸೃಷ್ಟಿಗೆ ಹೊಲಿಗೆ ಯಂತ್ರ ವಿತರಣೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಕೈಗಾರಿಕಾ ಪ್ರದೇಶಕ್ಕಾಗಿ ಈ ಭಾಗದ ಹಲವು ರೈತರು ತಮ್ಮ ಕೃಷಿ ಜಮೀನನ್ನು ಕಳೆದುಕೊಂಡು ನಿರುದ್ಯೋಗ ಸಮಸ್ಯೆ ಎದುರಿಸುತ್ತಿದ್ದಾರೆ. ಮಹಿಳೆಯರು ಕೂಡ ಇಂತಹ ಸಮಸ್ಯೆ ಎದುರಿಸುತ್ತಿದ್ದು ಅದನ್ನು ನಿವಾರಿಸುವ ನಿಟ್ಟಿನಲ್ಲಿ ಸ್ವಯಂ ಉದ್ಯೋಗ ಸೃಷ್ಟಿಸುವ ನಿಟ್ಟಿನಲ್ಲಿ ಹೊಲಿಗೆ ಯಂತ್ರ ವಿತರಿಸಲಾಗುತ್ತಿದೆ ಎಂದು ಶಾಸಕ ಹೆಚ್.ಪಿ.ಸ್ವರೂಪ್ ಹೇಳಿದರು.

ನಗರದ ಕೆಐಎಡಿಬಿ ಕಚೇರಿಯಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಪಂಚಾಯಿತಿ ಗ್ರಾಮೀಣ ಕೈಗಾರಿಕಾ ವಿಭಾಗದ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ ಸ್ವಾವಲಂಬಿ ಬದುಕಿಗೆ ಫಲಾನುಭವಿಗಳಿಗೆ ವಿವಿಧ ಉಪಕರಣಗಳನ್ನು ವಿತರಿಸಿ ಮಾತನಾಡಿ, ಮಹಿಳೆಯರ ಸ್ವಾವಲಂಬಿ ಬದುಕಿಗೆ ಸರ್ಕಾರಗಳು ಹಲವು ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ.




ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳು ಸದ್ಬಳಕೆ ಮಾಡಿಕೊಳ್ಳಬೇಕೆಂದು ತಿಳಿಸಿದರು. ಗ್ರಾಮ ಪಂಚಾಯಿತಿ ಹಂತದಲ್ಲಿ ಕೂಡ ಸ್ವಯಂ ಉದ್ಯೋಗಿನಿ ಜೊತೆಗೆ ವಿವಿಧ ಇಲಾಖೆಗಳಲ್ಲಿ ಕೂಡ ಹಲವು ಕಾರ್ಯಕ್ರಮಗಳು ಮಹಿಳೆಯರಿಗೆ ಮೀಸಲಿದ್ದು ಅವುಗಳನ್ನು ಅವರು ಬಳಸಿಕೊಂಡು ಆರ್ಥಿಕವಾಗಿ ಮುಂದೆ ಬರಬೇಕು.

ಜಿಲ್ಲಾ ಪಂಚಾಯಿತಿಯಲ್ಲಿ ಕೂಡ ಮಹಿಳೆಯರ ಸ್ವಾವಲಂಬಿ ಬದುಕು ಕಟ್ಟಿ ಕೊಡಲು ಹಲವು ಯೋಜನೆಗಳು ಇವೆ. ಗಾರೆ ಕೆಲಸದ ಉಪಕರಣಗಳು, ಮರಕೆಲಸದ ಉಪಕರಣಗಳು, ವಿದ್ಯುತ್ ಉಪಕರಣಗಳು ಸೇರಿ ವಿವಿಧ ಉಪಕರಣಗಳು ಲಭ್ಯವಿದೆ. ತಮ್ಮ ಇಚ್ಛೆಗೆ ಅನುಗುಣವಾಗಿ ತಮಗೆ ಇಷ್ಟದ ಕ್ಷೇತ್ರದಲ್ಲಿ ಬದುಕು ಕಟ್ಟಿಕೊಳ್ಳಲು ಬೇಕಾದ ಉಪಕರಣಗಳನ್ನು ಪಡೆಯಬಹುದು ಎಂದು ಮಾಹಿತಿ ನೀಡಿದರು. ಈ ವೇಳೆ ಕೈಗಾರಿಕೆ ಇಲಾಖೆ ಅಧಿಕಾರಿಗಳು ಹಾಜರಿದ್ದರು.

# ಎಲ್ಲ ಕ್ಷೇತ್ರಗಳಲ್ಲೂ ಹಾಸನದ ಹೆಗ್ಗುರುತು: ಶಾಸಕ ಸ್ವರೂಪ್ ಶ್ಲಾಘನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಕ್ರೀಡೆ, ರಾಜಕೀಯ, ಕಲೆ, ಸಾಹಿತ್ಯ ಎಲ್ಲಾ ಕ್ಷೇತ್ರದಲ್ಲಿ ಜಿಲ್ಲೆ ಹೆಸರು ಮಾಡಿದೆ ಎಂದು ಶಾಸಕ ಹೆಚ್.ಪಿ. ಸ್ವರೂಪ್ ಶ್ಲಾಘನೆ ವ್ಯಕ್ತಪಡಿಸಿದರು.

ನಗರದ ಸೆಂಟ್ ಜೋಸೆಫ್ ಶಾಲೆ ಸಭಾಂಗಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಹಾಗೂ ಶಾಲಾ ಮುಖ್ಯ ಶಿಕ್ಷಕರಿಗೆ ಅಭಿನಂದನಾ ಸಭಾರಂಭ ಉದ್ಘಾಟಿಸಿ ಮಾತನಾಡಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳಿಗೆ ಮತ್ತು ನೂರಕ್ಕೆ ನೂರರಷ್ಟು ಫಲಿತಾಂಶ ಪಡೆದ ಶಾಲಾ ಮುಖ್ಯ ಶಿಕ್ಷಕರಿಗೂ ಸನ್ಮಾನ ಮಾಡಲಾಗಿದೆ. 625ಕ್ಕೆ 625 ಅಂಕ ಪಡೆದ ಉಲ್ಲಾಸ್ ಪಟೇಲ್, ಮರು ಮೌಲ್ಯಮಾಪನದಲ್ಲಿ ಅರಸೀಕೆರೆ ವಿದ್ಯಾರ್ಥಿ 625 ಅಂಕ ಪಡೆದಿದ್ದು, ಈ ಮೂಲಕ ಜಿಲ್ಲೆಗೆ ಕೀರ್ತಿ ತಂದಿರುವುದಕ್ಕೆ ಸಂತಸ ವ್ಯಕ್ತಪಡಿಸಿದರು. ನೂರಾರು ಮಕ್ಕಳು 600ಕ್ಕೂ ಹೆಚ್ಚು ಅಂಕ ಪಡೆದಿರುವುದನ್ನು ಗುರುತಿಸಿ ಸರಕಾರಿ ಮತ್ತು ಖಾಸಗಿ ಶಾಲಾ ವಿದ್ಯಾರ್ಥಿಗಳನ್ನು ಕರೆಸಿ ಸನ್ಮಾನಿಸಿ ಗೌರವಿಸಲಾಗಿದೆ ಎಂದರು.



ವಿದ್ಯಾರ್ಥಿಗಳನ್ನು ಶಿಕ್ಷಕರು ಏನಾದರೂ ಬೈದು, ಹೊಡೆದು ಬುದ್ಧಿವಾದ ಹೇಳಿದರೆ ಪೋಷಕರು ಬಂದು ಶಿಕ್ಷಕರ ಮೇಲೆ ಕಠಿಣ ಕ್ರಮಕೈಗೊಳ್ಳಬೇಕೆನ್ನುವ ರೀತಿಯಲ್ಲಿ ಮಾತನಾಡುತ್ತಾರೆ ಎಂದು ಬೇಸರ ವ್ಯಕ್ತಪಡಿಸಿದರು. ಪೋಷಕರು ಮಕ್ಕಳಿಗೆ ಎಸ್.ಎಸ್.ಎಲ್.ಸಿ.ಯಲ್ಲಿ ಮಾತ್ರ ಒತ್ತಡ ಕೊಟ್ಟು ಪಿಯುಸಿಯಲ್ಲಿ ಸ್ವಲ್ಪ ಕಡಿಮೆ ಆಗುತ್ತಿದೆ.

ವಿದ್ಯಾರ್ಥಿಗಳಿಗೆ ಟರ್ನಿಂಗ್ ಪಾಯಿಂಟ್ ಎಂದರೆ ಪಿಯುಸಿ. ಪೋಷಕರು ಪಿಯು ಹಂತದಲ್ಲಿ ಮಕ್ಕಳಿಗೆ ಹೆಚ್ಚಿನ ಒತ್ತು ಕೊಡಬೇಕಾಗಿದೆ ಎಂದು ಕಿವಿಮಾತು ಹೇಳಿದರು. ಎಸ್.ಎಸ್.ಎಲ್.ಸಿ. ಪರೀಕ್ಷೆ ನಡೆಯುವ ಮೊದಲು ಡಿಡಿಪಿಐ ಅವರು ಎಲ್ಲಾ ಶಿಕ್ಷಕರನ್ನು ಕರೆದು ಕಾರ್ಯಾಗಾರ ಮಾಡಿ ಹೆಚ್ಚಿನ ಫಲಿತಾಂಶ ಮಾಡಲು ಕಾರಣಕರ್ತರಾಗಿದ್ದಾರೆ ಎಂದು ಇದೆ ವೇಳೆ ಶ್ಲಾಘಿಸಿದರು.

ಡಿಡಿಪಿಐ ಹೆಚ್.ಎಸ್. ಚಂದ್ರಶೇಖರ್ ಮಾತನಾಡಿ, ನಮ್ಮ ದೇಶದ ಗಡಿ ಕಾಯುವ ಯೋಧರಿಗೆ, ಅನ್ನ ಕೊಡುವ ರೈತರಿಗೆ ಹಾಗೂ ಶಿಕ್ಷಣ ಕೊಡುವ ನಮ್ಮ ಶಿಕ್ಷಕರಿಗೆ ಜವಾಬ್ದಾರಿ ಹೆಚ್ಚಿದೆ. ಹಾಸನಾಂಬೆ ಕೃಪೆಯಿಂದ ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಫಲಿತಾಂಶ ಬರುತ್ತಿದೆ. ಇದಕ್ಕೆ ಕಾರಣರಾದವರನ್ನು ಅಭಿನಂದಿಸಿದರು. ಶಾಲೆ ಬಿಟ್ಟ ಮಕ್ಕಳು ಮರಳಿ ಶಾಲೆಗೆ ಬರುವಂತೆ ಶಿಕ್ಷಕರು ಮಾಡಬೇಕು. ಶಾಸಕರು ಸರಕಾರಿ ಶಾಲೆಗೆ ಅನುದಾನ ಕೊಡಲು ಸಿದ್ಧರಿದ್ದಾರೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 6 ನೇ ಸ್ಥಾನ ಕಾಯ್ದುಕೊಂಡಿದ್ದೇವೆ. ಶಾಲೆ ಪ್ರಾರಂಭದಿಂದಲೇ ಶಿಕ್ಷಕರು ಮಕ್ಕಳನ್ನು ಸಿದ್ಧಪಡಿಸಬೇಕಾಗಿದೆ. ಯಾರು ಕೂಡ ಪರೀಕ್ಷೆಯಿಂದ ಹೊರಗುಳಿಯಬಾರದು. ಇದರಿಂದ ಶಿಕ್ಷಣದಿಂದ ವಂಚಿತರಾಗುತ್ತಾರೆ. ಜಿಲ್ಲೆಯನ್ನು ಮೊದಲ ಸ್ಥಾನಕ್ಕೆ ತರಲು ಶಿಕ್ಷಕರು ಮಕ್ಕಳನ್ನು ತಯಾರು ಮಾಡಬೇಕು. ಮಂಗಳೂರು, ಉಡುಪಿಯಂತೆ ಹಾಸನವೂ ಮೇಲೇರಬೇಕು. ಶಿಕ್ಷಣಕ್ಕೆ ತನ್ನದೇ ಆದ ಶಕ್ತಿ ಇದ್ದು, ದೇಶದ ಪ್ರಗತಿ ಶಿಕ್ಷಣದಿಂದ ಸಾಧ್ಯ ಎಂದು ಹೇಳಿದರು.

ಇದೇ ವೇಳೆ ಕಾರ್ಯಕ್ರಮದಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ 40ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ಶಾಲೆಯಲ್ಲಿ ನೂರಕ್ಕೆ ನೂರರಷ್ಟು ಶೇಕಡಾವಾರು ಫಲಿತಾಂಶ ಪಡೆದ ಮುಖ್ಯ ಶಿಕ್ಷಕರನ್ನು ಸನ್ಮಾನಿಸಿ ಗೌರವಿಸಿದರು.

ಬಿಇಒ ಮಂಜುಳಾ, ಶಿಕ್ಷಣ ಇಲಾಖೆಯ ಹೆಚ್.ಟಿ. ಗೀತಾ, ಆನಂದ್, ಫಾದರ್ ಲಿಯೋ, ಬಸವರಾಜು, ಖಾಸಗಿ ಶಿಕ್ಷಣ ಸಂಸ್ಥೆ ಸಂಘದ ಶಿವರಾಮೇಗೌಡ, ಚಂದ್ರಶೇಖರ್, ನೋಡಲ್ ಅಧಿಕಾರಿ ಮಲ್ಲಮ್ಮ ಮತತ್ತಿತರರಿದ್ದರು.

# ಸಾಹಿತಿ ಬಾನು ಮುಷ್ತಾಕ್‌ಗೆ ಸನ್ಮಾನ: ಯಶಸ್ಸಿಗೆ ಮನವಿ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಅಂತರಾಷ್ಟ್ರೀಯ ಬೂಕರ್ ಪ್ರಶಸ್ತಿ ಪಡೆಯುವ ಮೂಲಕ ಜಿಲ್ಲೆಯ ಕೀರ್ತಿ ಹೆಚ್ಚಿಸಿದ ಹಿರಿಯ ಸಾಹಿತಿ ಬಾನು ಮುಷ್ತಾಕ್ ಅವರಿಗೆ ಜೂ. 9 ರಂದು ಹಮ್ಮಿಕೊಂಡಿರುವ ನಾಗರಿಕ ಸನ್ಮಾನ ಸಮಾರಂಭ ಯಶಸ್ಸಿಗೆ ಜಿಲ್ಲೆಯ ಎಲ್ಲರೂ ಸಹಕರಿಸಬೇಕು ಎಂದು ದಲಿತ ಮುಖಂಡ ಹೆಚ್.ಕೆ. ಸಂದೇಶ್ ಮನವಿ ಮಾಡಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಅಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿ ಕಚೇರಿ ಆವರಣದಿಂದ ವಿವಿಧ ಜನಪದ ಕಲಾತಂಡಗಳ ಮೆರವಣಿಗೆ ಆರಂಭವಾಗಿ ನಂತರ ಹಾಸನಾಂಬ ಕಲಾಕ್ಷೇತ್ರದಲ್ಲಿ ನಾಗರಿಕ ಸನ್ಮಾನ ನಡೆಯಲಿದೆ. ಕಾರ್ಯಕ್ರಮಕ್ಕೆ ಹಾಸನ ಜಿಲ್ಲೆಯ ಎಲ್ಲಾ ದಲಿತ ಸಂಘಟನೆಗಳ ಮುಖಂಡರು, ಕಾರ್ಯಕರ್ತರು, ಚಳವಳಿ ಮುಖಂಡರು, ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ವಿನಂತಿಸಿದರು.

ಬಾನು ಮುಷ್ತಾಕ್ ಅವರಿಗೆ ಬೂಕರ್ ಪ್ರಶಸ್ತಿ ಒಲಿದಿರುವುದು ಕನ್ನಡ, ಕರ್ನಾಟಕ ಮಾತ್ರವಲ್ಲದೆ ಇಡೀ ದೇಶಕ್ಕೆ ಹೆಮ್ಮೆ ತಂದಿದೆ. ಕನ್ನಡ ಸಾಹಿತ್ಯಕ್ಕೆ ಜಾಗತಿಕ ಮಟ್ಟದಲ್ಲಿ ಮನ್ನಣೆ ದೊರಕಿದೆ. ಕನ್ನಡ ಈ ಅವಾರ್ಡ್ ಎಂದೂ ಸಿಕ್ಕಿರಲಿಲ್ಲ. ಇದೀಗ ಬಾನುಮುಷ್ತಾಕ್ ಅವರ ಮೂಲಕ ಪ್ರಾದೇಶಿಕ ಭಾಷೆಗೆ ದೊಡ್ಡ ಗೌರವ ಒಲಿದಿದೆ ಎಂದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248